**ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ರವರ ಶೂನ್ಯ ವೇಳೆ ಪ್ರಸ್ತಾಪಕ್ಕೆ ಉತ್ತರಿಸುವ ಬಗ್ಗೆ.**

**ವಿಷಯ**

"ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳ 55 ಶಾಲೆಗಳಲ್ಲಿ ಒಂದನೇ ತರಗತಿಗೆ ಶೂನ್ಯ ದಾಖಲಾತಿ " ಎಂಬ ಶೀರ್ಷಿಕೆಯಡಿ ದಿನಾಂಕ:09.07.2023ರ ಉದಯವಾಣಿ ಪತ್ರಿಕೆಯಲ್ಲಿ ವರದಿಯಾಗಿರುತ್ತದೆ.

ಪ್ರಸ್ತುತ 2023–24ನೇ ವರ್ಷದಲ್ಲಿ ದಕ್ಷಿಣ ಕನ್ನಡ ಉಡುಪಿ ಜಿಲ್ಲೆಗಳ 55 ಶಾಲೆಗಳಲ್ಲಿ ಒಂದನೇ ತರಗತಿಗೆ ಒಂದೂ ಮಗು ದಾಖಲಾಗಿಲ್ಲ. ಈ ವರ್ಷದ ಶೈಕ್ಷಣಿಕ ಅವಧಿಯ ಜೂನ್ 30ರ ತನಕ ದಾಖಲಾತಿ ಅಂಶಗಳು ಈ ವಿಷಯವನ್ನು ದೃಢೀಕರಿಸಿವೆ. ಉಳಿದ ತರಗತಿಗಳಲ್ಲಿ ಬೆರಳೆಣಿಕೆಯ ಮಕ್ಕಳು ಇರುವುದರಿಂದ ಶಾಲೆಯನ್ನು ಮುಚ್ಚಿಲ್ಲ. ಒಂದನೇ ತರಗತಿ ಮಾತ್ರ ನಡೆಯುತ್ತಿಲ್ಲ. ಇದೇ ರೀತಿ ಪರಿಸ್ಥಿತಿ ಮುಂದುವರೆದರೆ ಭವಿಷ್ಯದಲ್ಲಿ ಶಾಲೆಗಳೇ ಮುಚ್ಚುವ ಅಪಾಯವಿದೆ.

ಮಕ್ಕಳು ಕಡಿಮೆಯೆಂದು ಶಿಕ್ಷಕರ ಸಂಖ್ಯೆಯನ್ನು ಅನುಪಾತ ನಿಗದಿಪಡಿಸಿ ಕಡಿಮೆ ಮಾಡಿದ ಕಾರಣಕ್ಕಾಗಿ ಅಗತ್ಯ ಸೌಲಭ್ಯಗಳ ಕೊರತೆಯ ನೆಪವೊಡ್ಡಿ ಆರ್ಥಿಕ ಸ್ಥಿತಿವಂತರು ತಮ್ಮ ಮಕ್ಕಳನ್ನು ಖಾಸಗಿ ಶಾಲೆಗೆ ಕಳುಹಿಸುತ್ತಿರುವುದರಿಂದ ಇದು ಒಂದು ರೀತಿಯ ವಿಷವರ್ತುಲವಾಗಿ ಗ್ರಾಮೀಣ ಸರ್ಕಾರಿ ಶಾಲೆಗಳು ಕ್ರಮೇಣ ಮುಚ್ಚುವ ಸಂಭವ ನಿಚ್ಚಳವಾಗಿದೆ.

ಈ ಹಿನ್ನೆಲೆಯಲ್ಲಿ ಶಾಲೆಗಳ ಉನ್ನತಿಗಾಗಿ ಅಗತ್ಯ ಪ್ರಮಾಣದ ಶಿಕ್ಷಕರು, ಹೆಚ್ಚುವರಿ ಸಿಬ್ಬಂದಿ, ಸುಸಜ್ಜಿತ ಕಟ್ಟಡ ಸೇರಿದಂತೆ ಇನ್ನಿತರ ಮೂಲಭೂತ ಸೌಲಭ್ಯಗಳನ್ನು ಒದಗಿಸಿ ಉನ್ನತೀಕರಿಸಲು ಅಗತ್ಯ ಕ್ರಮಗಳನ್ನು ಜರುಗಿಸುವಂತೆ ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆ ಮಂತ್ರಿಗಳನ್ನು ಶೂನ್ಯ ವೇಳೆಯಲ್ಲಿ ಒತ್ತಾಯಿಸುತ್ತೇನೆ.

**ಉತ್ತರ**

2023–24ನೇ ಶೈಕ್ಷಣಿಕ ವರ್ಷದಲ್ಲಿ ದಕ್ಷಿಣ ಕನ್ನಡ, ಮತ್ತು ಉಡುಪಿ ಜಿಲ್ಲೆಯಲ್ಲಿ ಒಟ್ಟು 55 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 01ನೇ ತರಗತಿಯಲ್ಲಿ ಶೂನ್ಯ ದಾಖಲಾತಿಯಾಗಿರುತ್ತದೆ. ಆದರೆ 01ನೇ ತರಗತಿಯಲ್ಲಿ ಶೂನ್ಯ ದಾಖಲಾತಿಯಾಗಿರುವ ಕಾರಣಕ್ಕೆ ಯಾವುದೇ ಸರ್ಕಾರಿ ಶಾಲೆಗಳನ್ನು ಮುಚ್ಚಲಾಗಿರುವುದಿಲ್ಲ.

**ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳೂ ಸೇರಿದಂತೆ ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಿಸಲು, ಶಿಕ್ಷಕರನ್ನು ನೇಮಿಸಲು ಮತ್ತು ಸುಸಜ್ಜಿತ ಕಟ್ಟಡ ಸೇರಿದಂತೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ವಹಿಸಲಾಗಿರುವ ಕ್ರಮಗಳ ವಿವರ ಕೆಳಕಂಡಂತಿದೆ.**

1. ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಿಸಲು ವಿದ್ಯಾವಿಕಾಸ ಪ್ರೋತ್ಸಾಹದಾಯಕ ಯೋಜನೆಯಡಿ ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕ, ಸಮವಸ್ತ್ರ, ಶೂ ಸಾಕ್ಸ್, ಬಿಸಿಯೂಟ, ಕ್ಷೀರಭಾಗ್ಯ ಇನ್ನಿತರೆ ಸೌಲಭ್ಯಗಳನ್ನು ಉಚಿತವಾಗಿ ನೀಡಲಾಗುತ್ತಿದೆ ಮತ್ತು ತಂತ್ರಜ್ಞಾನ ಆಧಾರಿತ ಶಿಕ್ಷಣವನ್ನು ನೀಡಲಾಗುತ್ತಿದೆ.

2. ಮಕ್ಕಳಿಗೆ ಪ್ರತಿಭಾ ಕಾರಂಜಿ, ವಸ್ತು ಪ್ರದರ್ಶನ, ಸಾಂಸ್ಕೃತಿಕ ಕಾರ್ಯಕ್ರಮಗಳು, ಹಾಗೂ ವಿವಿಧ ಚಟುವಟಿಕೆಗಳನ್ನು ಆಯೋಜನೆ ಮಾಡುವುದರೊಂದಿಗೆ ಮಕ್ಕಳ ಗುಣಮಟ್ಟದ ಶಿಕ್ಷಣಕ್ಕೆ ಕ್ರಮವಹಿಸಲಾಗುತ್ತಿದೆ.

3. ಆರ್.ಟಿ.ಇ ನಿಯಮಗಳನ್ನು ಆಧರಿಸಿ ವಿದ್ಯಾರ್ಥಿ ಶಿಕ್ಷಕರ ಅನುಪಾತವನ್ನು ಮಾನದಂಡವಾಗಿ ಪರಿಗಣಿಸಿ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಮಂಜೂರಾದ ವೃಂದ ಬಲವನ್ನು ಗಮನದಲ್ಲಿಟ್ಟುಕೊಂಡು ಶಾಲೆಗಳಿಗೆ ಶಿಕ್ಷಕರನ್ನು ಲಭ್ಯಪಡಿಸಲಾಗಿದೆ.
4. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳೂ ಸೇರಿದಂತೆ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಒಟ್ಟು 27000 ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳುವ ಮೂಲಕ ಶಿಕ್ಷಕರ ಕೊರತೆಯನ್ನು ನೀಗಿಸಲು ಮತ್ತು ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯೂ ಸೇರಿದಂತೆ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ 15000 ಪದವೀಧರ ಪ್ರಾಥಮಿಕ ಶಿಕ್ಷಕರ (6 ರಿಂದ 8ನೇ ತರಗತಿ) ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ.
5. 2022-23ನೇ ಸಾಲಿನಲ್ಲಿ ಮಾನವ ಸಂಪನ್ಮೂಲವನ್ನು ಸಮರ್ಪಕ ಬಳಕೆ ದೃಷ್ಟಿಯಿಂದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳೂ ಸೇರಿದಂತೆ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿನ ಹೆಚ್ಚುವರಿ ಶಿಕ್ಷಕರ ಮರುಹೊಂದಾಣಿಕೆ ಪ್ರಕ್ರಿಯೆಯಲ್ಲಿ ಶಿಕ್ಷಕರನ್ನು ಅಗತ್ಯವಿರುವ ಶಾಲೆಗಳಿಗೆ ಮರು ಹೊಂದಾಣಿಕೆ ಮಾಡುವ ಮೂಲಕ 8825 ಶಿಕ್ಷಕರ ಕೊರತೆಯನ್ನು ನೀಗಿಸಲು ಕ್ರಮಗಳನ್ನು ಕೈಗೊಳ್ಳಲಾಗಿದೆ.
6. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು 896 ಪ್ರಾಥಮಿಕ ಶಾಲೆಗಳಲ್ಲಿ 5158 ಕೊಠಡಿಗಳಿವೆ. ಈ ಪೈಕಿ ಪ್ರಾಥಮಿಕ ಶಾಲೆಗಳಲ್ಲಿ 3574 ಉತ್ತಮ ಕೊಠಡಿಗಳಿದ್ದು ಭೋದನೆಗೆ ಯೋಗ್ಯವಾಗಿರುತ್ತವೆ ಹಾಗೂ 815ಕೊಠಡಿಗಳಿಗೆ ಸಣ್ಣ ಪ್ರಮಾಣದ ದುರಸ್ಥಿ ಮತ್ತು 769 ಕೊಠಡಿಗಳಿಗೆ ದೊಡ್ಡ ಪ್ರಮಾಣದ ದುರಸ್ಥಿಯ ಅವಶ್ಯಕತೆ ಇರುತ್ತದೆ. ಕೊಠಡಿ ದುರಸ್ಥಿ ಹಾಗೂ ನಿರ್ಮಾಣಕ್ಕೆ ಸಂಬಂಧಿಸಿದಂತೆ ಜಿಲ್ಲೆಗಳಲ್ಲಿ ಕ್ರಿಯಾಯೋಜನೆಗಳನ್ನು ಸಿದ್ಧಪಡಿಸಲಾಗುತ್ತಿದೆ. ದಕ್ಷಿಣ ಕನ್ನಡ ಜಿಲ್ಲೆಯ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಗಂಡು ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಶೌಚಾಲಯವಿರುತ್ತದೆ ಹಾಗೂ ಎಲ್ಲಾ ಸರ್ಕಾರಿ ಶಾಲೆಗಳಲ್ಲಿಯೂ ಕುಡಿಯುವ ನೀರಿನ ವ್ಯವಸ್ಥೆ ಇರುತ್ತದೆ.
7. ಉಡುಪಿ ಜಿಲ್ಲೆಯಲ್ಲಿ ಒಟ್ಟು 575 ಪ್ರಾಥಮಿಕ ಶಾಲೆಗಳಲ್ಲಿ 3065 ಕೊಠಡಿಗಳಿವೆ. ಈ ಪೈಕಿ ಪ್ರಾಥಮಿಕ ಶಾಲೆಗಳಲ್ಲಿ 2197 ಉತ್ತಮ ಕೊಠಡಿಗಳಿದ್ದು ಭೋದನೆಗೆ ಯೋಗ್ಯವಾಗಿರುತ್ತವೆ ಹಾಗೂ 470 ಕೊಠಡಿಗಳಿಗೆ ಸಣ್ಣ ಪ್ರಮಾಣದ ದುರಸ್ಥಿ ಮತ್ತು 398 ಕೊಠಡಿಗಳಿಗೆ ದೊಡ್ಡ ಪ್ರಮಾಣದ ದುರಸ್ಥಿಯ ಅವಶ್ಯಕತ ಇರುತ್ತದೆ. ಕೊಠಡಿ ದುರಸ್ಥಿಗೆ ಹಾಗೂ ನಿರ್ಮಾಣಕ್ಕೆ ಸಂಬಂಧಿಸಿದಂತೆ ಜಿಲ್ಲೆಗಳಲ್ಲಿ ಕ್ರಿಯಾಯೋಜನೆಗಳನ್ನು ಸಿದ್ಧಪಡಿಸಲಾಗುತ್ತಿದೆ. ಉಡುಪಿ ಜಿಲ್ಲೆಯ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಗಂಡು ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಶೌಚಾಲಯವಿರುತ್ತದೆ ಹಾಗೂ ಎಲ್ಲಾ ಸರ್ಕಾರಿ ಶಾಲೆಗಳಲ್ಲಿಯೂ ಕುಡಿಯುವ ನೀರಿನ ವ್ಯವಸ್ಥೆ ಇರುತ್ತದೆ.

ಇಪಿ 307 ಪಿಬಿಎಸ್ 2023

(ಎಸ್. ಮಧು ಬಂಗಾರಪ್ಪ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.